ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಟ್ಟಡ ನಿರ್ಮಿಸುವುದು

2703 (3690); ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ್ (ನಿಪ್ಪಾಣಿ)

ಅ) ನಿಪ್ಪಾಣಿ ಮತಕ್ಷೇತ್ರದ ಗವಾನ ಗ್ರಾಮದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಟ್ಟಡ ನಿರ್ಮಾಣದ ಪ್ರಸ್ತಾವನೆಯು ಯಾವ ಹಂತದಲ್ಲಿದೆ; ಪ್ರಸ್ತಾವನೆಯು ವಿಳಂಬಕ್ಕೆ ಕಾರಣ ಏನು;

ಆ) ಎಷ್ಟು ಎಕರೆ ಪ್ರದೇಶದಲ್ಲಿ, ಎಷ್ಟು ಮೊತ್ತದಲ್ಲಿ ಈ ಕಟ್ಟಡವನ್ನು ನಿರ್ಮಿಸಲಾಗುವುದು; ಅನುದಾನ ಕೊರತೆ ಇದೆಯೇ;

ಇ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಗವಾನ ಗ್ರಾಮದ ಸರ್ಕಾರಿ ಸ್ವಾಮ್ಯದ ಸರ್ವೆ ನಂ;40/1 ರಲ್ಲಿ 6 ಎಕರೆಯಷ್ಟು ಕ್ಷೇತ್ರವು ಮುರಾರ್ಜಿ ದೇಸಾಯಿ ವಸತಿ ಶಾಲೆಯ ನಿರ್ಮಾಣಕ್ಕೆ ಜಮೀನು ಮಂಜೂರಾಗಿದ್ದು, ಈ ಪ್ರದೇಶದಲ್ಲಿ ವಸತಿ ಶಾಲಾ ಸಂಕೀರ್ಣ ನಿರ್ಮಾಣಕ್ಕೆ 10.22 ಕೋಟಿಗಳಿಗೆ ಅಂದಾಜು ಪಟ್ಟಿ ತಯಾರಿಸಲಾಗಿದೆ. ಅನುದಾನದ ಕೊರತೆ ಇರುತ್ತದೆ.

ಇ) ಅನುದಾನದ ಲಭ್ಯತೆಗನುಗುಣವಾಗಿ ಶಾಲಾ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.